# All India Radio: Bangalore
# National Bulletin In Kannada
# 22.01.2025  13.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**22.01.2025  13.10 p.m.**

*****************

ಮುಖ್ಯಾಂಶಗಳು

1. 'ಬೇಟಿ ಬಚಾವೋ, ಬೇಟಿ ಪಡಾವೋ' ಪರಿವರ್ತನಾತ್ಮಕ ಅಭಿಯಾನ– ಪ್ರಧಾನಿ ನರೇಂದ್ರ ಮೋದಿ
2. ಪ್ರಯಾಗ್‌ರಾಜ್‌ನಲ್ಲಿ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ನೇತೃತ್ವದಲ್ಲಿ ವಿಶೇಷ ಸಂಪುಟ ಸಭೆ
3. ಕರ್ನಾಟಕದಲ್ಲಿ ಎರಡು ಪ್ರತ್ಯೇಕ ರಸ್ತೆ ಅಪಘಾತ; 14 ಮಂದಿ ಸಾವು, ಹಲವರಿಗೆ ಗಾಯ; ಸರ್ಕಾರದಿಂದ ಪರಿಹಾರ ಘೋಷಣೆ
4. ಐಎಸ್‌ಎಲ್ ಫುಟ್‌ಬಾಲ್; ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿಂದು ಬೆಂಗಳೂರು – ಒಡಿಶಾ ತಂಡಗಳ ನಡುವೆ ಸೆಣಸಾಟ

*****************

'ಬೇಟಿ ಬಚಾವೋ, ಬೇಟಿ ಪಡಾವೋ' ಅಭಿಯಾನ ಇಂದಿಗೆ ಹತ್ತು ವರ್ಷ ಪೂರ್ಣಗೊಳಿಸಿರುವ ಹಿನ್ನೆಲೆಯಲ್ಲಿ ಈ ಅಭಿಯಾನ ಪರಿವರ್ತನಾತ್ಮಕ, ಜನಚಾಲಿತ ಉಪಕ್ರಮವಾಗಿ ರೂಪಾಂತರಗೊಂಡಿದ್ದು, ಎಲ್ಲಾ ವರ್ಗಗಳ ಜನರ ಪಾಲ್ಗೊಳ್ಳುವಿಕೆ ಹೊಂದಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

ಲಿಂಗ ತಾರತಮ್ಯ ನಿವಾರಣೆಯಲ್ಲಿ ಅಭಿಯಾನ ಪ್ರಮುಖ ಪಾತ್ರವಹಿಸಿದೆ. ಹೆಣ್ಣುಮಕ್ಕಳಿಗೆ ಶಿಕ್ಷಣ, ಆಕೆಯ ಕನಸುಗಳ ನನಸಾಗಿಸಿಕೊಳ್ಳಲು ಸೂಕ್ತ ಅವಕಾಶ ಹೊಂದಲು, ಸರಿಯಾದ ವಾತಾವರಣವನ್ನು ಸೃಷ್ಟಿಸಿದೆ ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

ಕಡಿಮೆ ಮಕ್ಕಳ ಲಿಂಗಾನುಪಾತ ಹೊಂದಿರುವ ಜಿಲ್ಲೆಗಳು ಯೋಜನೆಯ ಜಾರಿಯ ನಂತರ ಗಮನಾರ್ಹ ಸುಧಾರಣೆಗಳು ಕಂಡಿಬಂದಿದೆ. ಜಾಗೃತಿ ಅಭಿಯಾನಗಳು ಲಿಂಗ ಅಸಮಾನತೆಯ ಕುರಿತ ಹೆಚ್ಚಿನ ಜಾಗೃತಿಯನ್ನು ಮೂಡಿಸಿವೆ ಎಂದು ವಿವರಿಸಿದ್ದಾರೆ.

ಹೆಣ್ಣು ಮಕ್ಕಳ ಸಬಲೀಕರಣದ ಪಯಣದಲ್ಲಿ ಗಮನಾರ್ಹ ಮೈಲುಗಲ್ಲು ಸಾಧಿಸಿದ್ದಕ್ಕಾಗಿ ಜನರು ಹಾಗೂ ಸಂಸ್ಥೆಗಳ ಸಮರ್ಪಿತ ಪ್ರಯತ್ನಗಳಿಗೆ ಪ್ರಧಾನಿ ಧನ್ಯವಾದ ಸಲ್ಲಿಸಿದ್ದಾರೆ.

ಆಂದೋಲನವನ್ನು ಬೇರು ಮಟ್ಟದಲ್ಲಿ ಚೈತನ್ಯಶೀಲವಾಗಿಸಿದ ಎಲ್ಲಾ ಭಾಗಿಧಾರರನ್ನು ಪ್ರಧಾನಿ ಶ್ಲಾಘಿಸಿದ್ದಾರೆ. ಬಾಲಕಿಯರ ಹಕ್ಕುಗಳನ್ನು ರಕ್ಷಿಸುವುದನ್ನು ಮುಂದುವರಿಸಲು, ಅವರ ಶಿಕ್ಷಣವನ್ನು ಖಾತರಿಪಡಿಸಲು ತಾರತಮ್ಯವಿಲ್ಲದೆ, ಅಭಿವೃದ್ಧಿ ಹೊಂದಬಹುದಾದ ಸಮಾಜವನ್ನು ಸೃಷ್ಟಿಸಲು ಎಲ್ಲರಿಗೂ ಪ್ರಧಾನಿ ಮನವಿ ಮಾಡಿದ್ದಾರೆ.

*****************

ಹೆಣ್ಣುಮಕ್ಕಳ ಸುರಕ್ಷತೆ, ಶಿಕ್ಷಣ ಮತ್ತು ಸಬಲೀಕರಣದ ಗುರಿಯೊಂದಿಗೆ ಜಾರಿ ಮಾಡಲಾದ 'ಬೇಟಿ ಬಚಾವ್ ಬೇಟಿ ಪಢಾವ್' ಉಪಕ್ರಮದ ಹತ್ತನೇ ವಾರ್ಷಿಕೋತ್ಸವನ್ನು ಇಂದು ಆಚರಿಸಲಾಗುತ್ತಿದೆ.

ನವದೆಹಲಿಯಲ್ಲಿ ಇಂದು ನಡೆಯುವ ಪ್ರಧಾನ ಕಾರ್ಯಕ್ರಮದಲ್ಲಿ ಭದ್ರತಾ ಪಡೆ, ಅರೆ ಸೇನಾಪಡೆ, ದೆಹಲಿ ಪೊಲೀಸ್ ಪಡೆಯ ಮಹಿಳಾ ಅಧಿಕಾರಿಗಳು, ವಿದ್ಯಾರ್ಥಿನಿಯರು ಮತ್ತು ಅಂಗನವಾಡಿ ಕಾರ್ಯಕರ್ತೆಯರು ಭಾಗವಹಿಸಲಿದ್ದಾರೆ.

ಇಂದು ಚಾಲನೆ ದೊರೆಯಲಿರುವ ಹತ್ತನೇ ವಾರ್ಷಿಕೋತ್ಸವದ ಸಂಭ್ರಮಾಚರಣೆ ಅಂತಾರಾಷ್ಟ್ರೀಯ ಮಹಿಳಾ ದಿನವಾದ ಮಾರ್ಚ್ 8 ರವರೆಗೆ ನಡೆಯಲಿದೆ. ವಿವಿಧ ರಾಜ್ಯ ಹಾಗೂ ಜಿಲ್ಲಾ ಮಟ್ಟದಲ್ಲಿ ಈ ಸಂಬಂಧ ಹಲವು ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ತಿಳಿಸಿದೆ.

ದೇಶದಲ್ಲಿ ಕುಸಿಯುತ್ತಿರುವ ಮಕ್ಕಳ ಲಿಂಗಾನುಪಾತ ಮತ್ತು ಲಿಂಗ ಅಸಮಾನತೆಯ ಸಮಸ್ಯೆಗೆ ಉತ್ತರವಾಗಿ 2015ರ ಜನವರಿ 22 ರಂದು ಹರಿಯಾಣದ ಪಾಣಿಪತ್‌ನಲ್ಲಿ ಪ್ರಧಾನಿ ನರೇಂದ್ರ ಮೋದಿ, ಈ ಯೋಜನೆಗೆ ಚಾಲನೆ ನೀಡಿದ್ದರು.

*****************

ಹೆಣ್ಣು ಮಕ್ಕಳ ಭವಿಷ್ಯಕ್ಕಾಗಿ ಕೇಂದ್ರ ಸರ್ಕಾರ ಜಾರಿ ಮಾಡಿರುವ 'ಸುಕನ್ಯಾ ಸಮೃದ್ಧಿ ಯೋಜನೆ' ಜಾರಿಯಾಗಿ ಇಂದಿಗೆ ಹತ್ತು ವರ್ಷ. ಈ ಅವಧಿಯಲ್ಲಿ ದೇಶಾದ್ಯಂತ 4 ಕೋಟಿಗೂ ಅಧಿಕ ಸುಕನ್ಯಾ ಸಮೃದ್ಧಿ ಖಾತೆಗಳನ್ನು ತೆರೆಯಲಾಗಿದೆ ಎಂದು ಹಣಕಾಸು ಸಚಿವಾಲಯ ತಿಳಿಸಿದೆ.

2015ರ ಜನವರಿ 22ರಂದು ಕೇಂದ್ರ ಸರ್ಕಾರ 'ಬೇಟಿ ಬಚಾವೋ ಬೇಟಿ ಫಡಾವೋ' ಅಭಿಯಾನದ ಅಂಗವಾಗಿ ಸುಕನ್ಯಾ ಸಮೃದ್ಧಿ ಯೋಜನೆಯನ್ನು ಆರಂಭಿಸಿತ್ತು. ಈ ಯೋಜನೆಯಡಿ ಪೋಷಕರು, ಕನಿಷ್ಠ 250 ರೂಪಾಯಿಯಿಂದ ವಾರ್ಷಿಕ 1.5 ಲಕ್ಷ ರೂಪಾಯಿ ಮೊತ್ತವನ್ನು ಅಂಚೆ ಕಚೇರಿ ಅಥವಾ ನಿಯೋಜಿತ ವಾಣಿಜ್ಯ ಬ್ಯಾಂಕ್ ಗಳಲ್ಲಿ ಠೇವಣಿ ಇರಿಸಬಹುದಾಗಿದೆ. ಪ್ರಸ್ತುತ ಈ ಯೋಜನೆಯಡಿ ಶೇಕಡ 8.2 ರಷ್ಟು ವಾರ್ಷಿಕ ಬಡ್ಡಿ ನೀಡಲಾಗುತ್ತಿದೆ ಎಂದು ಹಣಕಾಸು ಸಚಿವಾಲಯ ತನ್ನ ಪ್ರಕಟಣೆಯಲ್ಲಿ ತಿಳಿಸಿದೆ.

*****************

ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಪ್ರಯಾಗ್‌ರಾಜ್‌ನಲ್ಲಿಂದು ಮಹಾಕುಂಭ ಮೇಳ ಸಂಬಂಧ ವಿಶೇಷ ಸಂಪುಟ ಸಭೆ ನಡೆಸಿದರು. ಉತ್ತರ ಪ್ರದೇಶ ಸರ್ಕಾರದ ಎಲ್ಲಾ 54 ಸಚಿವರು ಈ ಸಭೆಯಲ್ಲಿ ಪಾಲ್ಗೊಂಡಿದ್ದರು.

ಸಂಪುಟ ಸಭೆಯ ಮುನ್ನ ಮಾಧ್ಯಮಗಳೊಂದಿಗೆ ಮಾತನಾಡಿದ ಉಪಮುಖ್ಯಮಂತ್ರಿ ಕೇಶವ ಪ್ರಸಾದ್ ಮೌರ್ಯ, ಸಭೆಯಲ್ಲಿ ಹಲವು ಮಹತ್ವದ ನಿರ್ಧಾರಗಳನ್ನು ಕೈಗೊಳ್ಳಲಾಗುವುದು ಎಂದು ಹೇಳಿದರು.

ಅಲ್ಲದೆ, ಮುಖ್ಯಮಂತ್ರಿ ಸೇರಿದಂತೆ ಎಲ್ಲಾ ಸಚಿವರು ಸಂಗಮದಲ್ಲಿ ಪುಣ್ಯ ಸ್ನಾನ ಮಾಡಲಿದ್ದಾರೆ ಎಂದು ತಿಳಿಸಿದರು.

*****************

ಕರ್ನಾಟಕದಲ್ಲಿ ಇಂದು ಮುಂಜಾನೆ ಸಂಭವಿಸಿದ ಎರಡು ಪ್ರತ್ಯೇಕ ರಸ್ತೆ ಅವಘಡಗಳಲ್ಲಿ 14 ಮಂದಿ ಮೃತಪಟ್ಟು, ಹಲವರು ಗಾಯಗೊಂಡಿರುವ ಘಟನೆ ನಡೆದಿದೆ.

ಉತ್ತರಕನ್ನಡ ಜಿಲ್ಲೆಯ ಯಲ್ಲಾಪುರ ತಾಲ್ಲೂಕಿನ ಅರಬೈಲ್ ಘಟ್ಟದ ಬಳಿ ತರಕಾರಿ ತುಂಬಿದ್ದ ಲಾರಿ ಇಂದು ಬೆಳಗಿನ ಜಾವ ಪಲ್ಟಿಯಾಗಿ, 10 ಮಂದಿ ಸ್ಥಳದಲ್ಲೇಯೇ ಸಾವನ್ನಪ್ಪಿದ್ದಾರೆ.

ಕುಮಟಾದಲ್ಲಿ ನಡೆಯುವ ವಾರದ ಸಂತೆಗೆ ಹಾವೇರಿಯ ಸವಣೂರಿನಿಂದ ಯಲ್ಲಾಪುರ ಮಾರ್ಗವಾಗಿ ತರಕಾರಿ ಸಾಗಿಸುವ ವೇಳೆ ಈ ದುರ್ಘಟನೆ ನಡೆದಿದೆ. ಮೃತರೆಲ್ಲರೂ ತರಕಾರಿ ವ್ಯಾಪಾರಿಗಳಾಗಿದ್ದು, ಲಾರಿಯಲ್ಲಿ ತರಕಾರಿ ದಾಸ್ತಾನಿನ ಜೊತೆಗೆ 30 ಕ್ಕೂ ಹೆಚ್ಚು ವ್ಯಾಪಾರಿಗಳು ಪ್ರಯಾಣಿಸುತ್ತಿದ್ದರು.

ಚಾಲಕನ ನಿಯಂತ್ರಣ ತಪ್ಪಿದ ಪರಿಣಾಮ ಲಾರಿ ರಸ್ತೆಯ ಪಕ್ಕದ ಕಂದಕಕ್ಕೆ ಉರುಳಿದ್ದರಿಂದ ದುರ್ಘಟನೆ ಸಂಭವಿಸಿದೆ. 16 ಕ್ಕೂ ಹೆಚ್ಚು ಮಂದಿಗೆ ಗಂಭೀರ ಗಾಯಗಳಾಗಿದ್ದು, ಅವರನ್ನು ಹುಬ್ಬಳ್ಳಿಯ ಕಿಮ್ಸ್ ಗೆ ದಾಖಲಿಸಲಾಗಿದೆ. ಇನ್ನುಳಿದವರನ್ನು ಯಲ್ಲಾಪುರ ತಾಲೂಕಾ ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮತ್ತೊಂದೆಡೆ ರಾಯಚೂರು ಜಿಲ್ಲೆಯ ಸಿಂಧನೂರು ತಾಲೂಕಿನ ಅರಗಿನಮರ ಕ್ಯಾಂಪ್ ಬಳಿ ಇಂದು ಬೆಳಗ್ಗೆ ಕ್ರೂಸರ್ ವಾಹನದ ಟೈರ್ ಸ್ಫೋಟಗೊಂಡು ಪಲ್ಟಿಯಾದ ಪರಿಣಾಮ ಚಾಲಕ ಸೇರಿದಂತೆ ವಾಹನದಲ್ಲಿದ್ದ ಮೂವರು ವಿದ್ಯಾರ್ಥಿಗಳು ಮೃತಪಟ್ಟಿದ್ದಾರೆ. ವಿದ್ಯಾರ್ಥಿಗಳು ಮಂತ್ರಾಲಯದ ಸಂಸ್ಕೃತ ವಿದ್ಯಾಪೀಠಕ್ಕೆ ಸೇರಿದವರಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ರಾಜ್ಯದಲ್ಲಿ ನಡೆದ ಎರಡು ರಸ್ತೆ ಅವಘಡಗಳಲ್ಲಿ 14 ಮಂದಿ ಸಾವನ್ನಪ್ಪಿರುವುದಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ. ಮೃತಪಟ್ಟ ಕುಟುಂಬಸ್ಥರಿಗೆ ದುಃಖ ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸಿದ್ದಾರೆ.

ಮೃತಪಟ್ಟವರ ಕುಟುಂಬಗಳಿಗೆ ರಾಜ್ಯ ಸರ್ಕಾರದ ವತಿಯಿಂದ ತಲಾ 3 ಲಕ್ಷ ರೂಪಾಯಿ ಪರಿಹಾರ ನೀಡಲಾಗುವುದು. ಜೊತೆಗೆ ಅಪಘಾತದಲ್ಲಿ ಗಾಯಗೊಂಡವರ ಉಚಿತ ಚಿಕಿತ್ಸೆಗೆ ವ್ಯವಸ್ಥೆ ಮಾಡಲಾಗುವುದು ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

*****************

ರಾಷ್ಟ್ರ ರಾಜಧಾನಿಯಲ್ಲಿ, ದೇಶಾದ್ಯಂತದ ವಾಹನ ಪ್ರಿಯರು ಭಾರತ್ ಮಂಟಪದಲ್ಲಿ ನಡೆಯುತ್ತಿರುವ ಭಾರತ್ ಮೊಬಿಲಿಟಿ ಗ್ಲೋಬಲ್ ಎಕ್ಸ್‌ಪೋ –2025 ಗೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಿದ್ದು, ಹೊಸದಾಗಿ ಬಿಡುಗಡೆಯಾದ ಮತ್ತು ಮುಂದುವರಿದ ವಾಹನಗಳನ್ನು ಅನ್ವೇಷಿಸುತ್ತಿದ್ದಾರೆ.

ಎಲೆಕ್ಟ್ರಾನಿಕ್ಸ್ ಮತ್ತು ವಿಂಟೇಜ್ ಕಾರುಗಳು ವೀಕ್ಷಕರ 'ಆಕರ್ಷಣೆಯ ಕೇಂದ್ರಬಿಂದುವಾಗಿದೆ. ಬೈಕ್‌ಗಳು, ಸ್ಕೂಟಿ ಮತ್ತು ಅನೇಕ ದ್ವಿಚಕ್ರ ಮತ್ತು ತ್ರಿಚಕ್ರ ವಾಹನಗಳು ಸಹ ಜನರನ್ನು ಆಕರ್ಷಿಸುತ್ತಿವೆ. ಶೀಘ್ರದಲ್ಲೇ ಬಿಡುಗಡೆಯಾಗಲಿರುವ ವಾಹನಗಳನ್ನು ಭಾರತ್ ಮೊಬಿಲಿಟಿ ಗ್ಲೋಬಲ್ ಎಕ್ಸ್‌ಪೋದಲ್ಲಿ ಪ್ರದರ್ಶಿಸಲಾಗಿದೆ. ಇಂದು ಪ್ರದರ್ಶನದ ಕೊನೆಯ ದಿನ. ಭೇಟಿ ನೀಡುವವರು ಬೆಳಿಗ್ಗೆ 10 ರಿಂದ ಸಂಜೆ 6 ರವರೆಗೆ ನೋಂದಣಿಯೊಂದಿಗೆ ಭೇಟಿ ನೀಡಬಹುದು.

*****************

ಶಾಸನ ಸಭೆಗಳಲ್ಲಿ ಕಲಾಪದ ವೇಳೆ ಗದ್ದಲ ಮುಕ್ತ ಪರಿಸರ ಖಾತರಿಪಡಿಸಲು ಹಾಗೂ ಗುಣಮಟ್ಟದ ಚರ್ಚೆ, ಸಂವಾದ ನಡೆಸಲು ಶಾಸನ ಸಭೆಗಳ ಅಖಿಲ ಭಾರತ ಪೀಠಾಸೀನ ಅಧಿಕಾರಿಗಳ ಸಮ್ಮೇಳನ ನಿರ್ಣಯವನ್ನು ಅಂಗೀಕರಿಸಿದೆ.

ಸಂಸತ್ತು ಹಾಗೂ ಶಾಸನ ಸಭೆಗಳ ಅತ್ಯುನ್ನತ ಸಂಸ್ಥೆ, ಪಾಟ್ನಾದಲ್ಲಿ ನಡೆದ 85ನೇ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಈ ಸಂಬಂಧ ಐದು ನಿರ್ಣಯಗಳನ್ನು ಅಂಗೀಕರಿಸಿದೆ.

85ನೇ ಅಖಿಲ ಭಾರತ ಪೀಠಾಸೀನಾಧಿಕಾರಿಗಳ ಸಮಾರೋಪ ಸಮ್ಮೇಳನ ಉದ್ದೇಶಿಸಿ ಮಾತನಾಡಿ ಲೋಕಸಭಾ ಸ್ಪೀಕರ್ ಓಂ ಬಿರ್ಲಾ, ಕಲಾಪಗಳು ನಡೆಯದಂತೆ ಯೋಜಿತ ರೀತಿಯಲ್ಲಿ ಅಡ್ಡಿಪಡಿಸುವುದು ಹಾಗೂ ಗದ್ದಲ ಸೃಷ್ಟಿಸುತ್ತಿರುವ ಬಗ್ಗೆ ಪೀಠಾಸೀನಾಧಿಕಾರಿಗಳು ಗಂಭೀರ ಕಳವಳ ವ್ಯಕ್ತಪಡಿಸಿದ್ದಾರೆ ಎಂದರು.

ರಾಜಕೀಯ ಪಕ್ಷಗಳು ಶಾಸನ ಸಭೆಗಳಲ್ಲಿ ಸುಗಮ ಕಲಾಪ ನಡೆಸಲು ಸಾಧ್ಯವಾಗುವಂತೆ ತಮ್ಮದೇ ಆದ ನೀತಿ ಸಂಹಿತೆಯನ್ನು ರೂಪಿಸಿಕೊಳ್ಳುವ ಬಗ್ಗೆ ಒಮ್ಮತಕ್ಕೆ ಬರಬೇಕು ಎಂದು ಹೇಳಿದರು.

ಧ್ವನಿ: ಓಂ ಬಿರ್ಲಾ, ಲೋಕಸಭಾ ಸ್ಪೀಕರ್

ಎಲ್ಲ ಶಾಸನಸಭಾ ಸಂಸ್ಥೆಗಳನ್ನು ಒಂದೇ ಡಿಜಿಟಲ್ ವೇದಿಕೆಗೆ ತರುವ ಒಂದು ದೇಶ, ಒಂದು ಶಾಸಕಾಂಗ ವೇದಿಕೆ ಅಭಿಯಾನ ಈ ವರ್ಷ ಪೂರ್ಣಗೊಳ್ಳಲಿದೆ ಎಂದು ಹೇಳಿದರು. ಕೃತಕಬುದ್ಧಿಮತ್ತೆ ಬಳಸಲು ಲೋಕಸಭೆ ಶಾಸನ ಸಭೆಗಳಿಗೆ ನೆರವು ನೀಡಲಿದೆ ಎಂದು ಭರವಸೆ ನೀಡಿದರು.

*****************

ಸ್ವಿಟ್ಜರ್‌ಲ್ಯಾಂಡ್‌ನ ದಾವೋಸ್‌ನಲ್ಲಿ ನಡೆಯುತ್ತಿರುವ ವಿಶ್ವ ಆರ್ಥಿಕ ವೇದಿಕೆಯ ಮೊದಲನೇ ದಿನದಂದು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ನೇತೃತ್ವದಲ್ಲಿ 6 ಲಕ್ಷದ 25 ಸಾವಿರದ 457 ಕೋಟಿ ಮೌಲ್ಯದ ಹೂಡಿಕೆ ಒಪ್ಪಂದಗಳಿಗೆ ಸಹಿ ಹಾಕಲಾಯಿತು.

ಒಂದೇ ದಿನದಲ್ಲಿ ಬೃಹತ್ ಹೂಡಿಕೆ ಮೊತ್ತವನ್ನು ರಾಜ್ಯವೊಂದು ಪಡೆದುಕೊಂಡಿರುವುದು ಹೊಸ ದಾಖಲೆಯಾಗಿದೆ. ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಹಲವಾರು ಪ್ರಮುಖ ಕಂಪನಿಗಳ ಮುಖ್ಯಸ್ಥರನ್ನು ಭೇಟಿ ಮಾಡಿ, ಮಹಾರಾಷ್ಟ್ರದಲ್ಲಿ ಹೂಡಿಕೆ ಮಾಡುವಂತೆ ಆಹ್ವಾನ ನೀಡಿದ್ದಾರೆ.

ಟಾಟಾ ಗ್ರೂಪ್ ಅಧ್ಯಕ್ಷ ಎನ್.ಚಂದ್ರಶೇಖರನ್ ಅವರೊಂದಿಗೆ ಫಡ್ನವೀಸ್ ಅವರು, ಮಾತುಕತೆ ನಡೆಸಿದರು. ಈ ಸಂದರ್ಭದಲ್ಲಿ ಟಾಟಾ ಗ್ರೂಪ್ ಮಹಾರಾಷ್ಟ್ರದಲ್ಲಿ 30 ಸಾವಿರ ಕೋಟಿ ರೂಪಾಯಿ ಹೂಡಿಕೆ ಮಾಡಲಾಗುವುದು ಎಂದು ದೃಢಪಡಿಸಲಾಯಿತು.

ಫಡ್ನವೀಸ್ ಅವರು, ಕಾರ್ಲ್ಸ್ ಬರ್ಗ್ ಗ್ರೂಪ್, ಲುಲು ಗ್ರೂಪ್, ರೆನ್ಯೂ ಪವರ್, ಸ್ನೈಡರ್ ಎಲೆಕ್ಟ್ರಿಕ್, ಮಾಸ್ಟರ್ ಕಾರ್ಡ್, ಕಾಗ್ನಿಜೆಂಟ್ ಹಾಗೂ ಇತರ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ಚರ್ಚೆ ನಡೆಸಿದರು.

*****************

ಇಂಡಿಯನ್ ಸೂಪರ್ ಲೀಗ್– ಐಎಸ್‌ಎಲ್ ಫುಟ್‌ಬಾಲ್ ಪಂದ್ಯಾವಳಿಯಲ್ಲಿ ಬೆಂಗಳೂರು ಎಫ್‌ಸಿ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿಂದು ಒಡಿಶಾ ಎಫ್‌ಸಿಯನ್ನು ಎದುರಿಸಲಿದೆ, ಪಂದ್ಯ ಸಂಜೆ 7:30 ಕ್ಕೆ ಪ್ರಾರಂಭವಾಗಲಿದೆ.

ಚೆನ್ನೈಯಿನ್ ತಂಡವು ಇದೇ 25 ರಂದು ಎಫ್‌ಸಿ ಗೋವಾವನ್ನು ಎದುರಿಸಿದರೆ, ಇದೇ 27 ರಂದು ಮೋಹನ್ ಬಗಾನ್ ತಂಡ, ಬೆಂಗಳೂರು ಎಫ್‌ಸಿ ತಂಡದ ವಿರುದ್ಧ ಸೆಣಸಲಿದೆ.

*****************

ಕೋಲ್ಕತ್ತಾದ ಈಡನ್ ಗಾರ್ಡನ್ಸ್‌ನಲ್ಲಿ ಐದು ಪಂದ್ಯಗಳ ಟಿ–20 ಕ್ರಿಕೆಟ್ ಸರಣಿಯ ಮೊದಲ ಪಂದ್ಯದಲ್ಲಿ ಇಂದು ಭಾರತ ತಂಡವು ಇಂಗ್ಲೆಂಡ್ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಸಂಜೆ 7 ಗಂಟೆಗೆ ಆರಂಭವಾಗಲಿದೆ.

ಆಸ್ಟ್ರೇಲಿಯಾದಲ್ಲಿ ನಡೆದ ಬಾರ್ಡರ್–ಗವಾಸ್ಕರ್ ಟ್ರೋಫಿ ಸರಣಿಯ ಸೋಲಿನ ನಂತರ, ಭಾರತ ತಂಡವು ಈ ಸರಣಿಯನ್ನು ಗೆಲ್ಲುವ ಹುಮ್ಮಸಿನಲ್ಲಿದೆ.

*********ಮುಕ್ತಾಯ********